ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಹೃದ್ರೋಗ ಆಸ್ಪತ್ರೆಗಳನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸುವ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

75 (147) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹeóï ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರು (6) ಕೋಟಿಗೂ ಮಿಗಿಲಾದ ಜನಸಂಖ್ಯೆಯುಳ್ಳ ರಾಜ್ಯದಲ್ಲಿ ಹೃದ್ರೋಗದಿಂದ ನರಳುತ್ತಿರುವ ರೋಗಿಗಳು ಚಿಕಿತ್ಸೆಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೃದ್ರೋಗ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶ್ರಮಿಸುತ್ತಿರುವ ಬೆಂಗಳೂರಿನ ಜಯದೇವ ಆಸ್ಪತ್ರೆಯ ಶಾಖೆಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಒಂದೊಂದರಂತೆ ಮತ್ತು ಬೆಂಗಳೂರಿನ ವಿವಿಧ ಕಡೆ ತೆರೆಯುವ ಅವಶ್ಯಕತೆ ಬಗ್ಗೆ ಸರ್ಕಾರ ಪರಿಶೀಲಿಸಿ ಕ್ರಮ ಕೈಗೊಳ್ಳುವುದೆ ?